# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕೋರಮಂಗಲ ಉಪ–ವಿಭಾಗದ, ಜಕ್ಕಸಂದ್ರ ವಾರ್ಡ್ ಸಂಖ್ಯೆ–173 ದಿನಾಂಕ: 03–04–2021 ರಂದು ಏಪ್ರಿಲ್–2021 ಮಾಹೆಯ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಶ್ರೀ ಸಂಜೀವ್‌ಕುಮಾರ್, ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 173ರ ರವರ ಅಧ್ಯಕ್ಷತೆಯಲ್ಲಿ ಗ್ರಂಥಾಲಯ ಕಟ್ಟಡ, ಉದ್ಯಾನವನ ಹತ್ತಿರ, ಹೆಚ್.ಎಸ್.ಆರ್. 5ನೇ ಸೆಕ್ಟರ್, ಜಕ್ಕಸಂದ್ರ, (ಜಕ್ಕಸಂದ್ರ ವಾರ್ಡ್ ಕಛೇರಿ, ಬಿ.ಬಿ.ಎಂ.ಪಿ) ಬೆಂಗಳೂರು ದಿನಾಂಕ: 03.04.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ಸಮಿತಿ ಸದಸ್ಯರುಗಳು ಹಾಗೂ ಸಂಬಂಧಿಸಿದ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು:

**ಹಾಜರಿದ್ದ ಸದಸ್ಯರು:–**

1. ಶ್ರೀ ಎಂ.ಕೆ.ಎನ್. ಆಚಾರ್ಯ
2. ಶ್ರೀ ಎಂ.ಎ. ಪೊನ್ನಪ್ಪ
3. ಶ್ರೀ ಸಾಜಿ ಜಾರ್ಜ್
4. ಶ್ರೀಮತಿ ಸರಸ್ವತಮ್ಮ

**ಹಾಜರಿದ್ದ ಅಧಿಕಾರಿಗಳು:–**

1. ಶ್ರೀ ಪ್ರದೀಪ್ ಕುಮಾರ್, ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು, ವಾರ್ಡ್–173 ಜಕ್ಕಸಂದ್ರ
2. ಶ್ರೀ ಅರವಿಂದ್ .ಆರ್, ಕಿರಿಯ ಆರೋಗ್ಯ ನಿರೀಕ್ಷಕರು
3. ಶ್ರೀ ಎಸ್. ನವೀನ್, ಬಿ.ಡಬ್ಲ್ಯೂ.ಎಸ್.ಎಸ್.ಬಿ.
4. ಶ್ರೀ ಎನ್.ಆರ್. ಬಾಬು, ಅರಣ್ಯ ಇಲಾಖೆ
5. ಶ್ರೀ ಎಲ್.ವಿ. ಹೆನ್ರಿ
6. ಶ್ರೀ ಪಿ. ಜ್ಞಾನೇಶ್ವರ್ (ವಿದ್ಯುತ್)
7. ಶ್ರೀ ಮಂಜುನಾಥ್ .ಪಿ, ಮಾರ್ಷಲ್

* * * * *

ಶ್ರೀ ಸಂಜೀವ್‌ಕುಮಾರ್, ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ವಾರ್ಡ್ ಸಂಖ್ಯೆ 173 ರವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ವಾರ್ಡ್ ಸಮಿತಿ ಸದಸ್ಯರುಗಳನ್ನು ಹಾಗೂ ವಾರ್ಡ್‌ನ ಅಧಿಕಾರಿಗಳನ್ನು ಸಭೆಗೆ ಸ್ವಾಗತಿಸಿದರು ಮತ್ತು ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳು, ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲು ತಿಳಿಸಿದರು.

ಶ್ರೀ ಎಂ.ಎ. ಪೊನ್ನಪ್ಪ ರವರು ಮಾತನಾಡಿ, 13ನೇ ಮುಖ್ಯರಸ್ತೆಯ ಹಾಸ್ಪಿಟಲ್ ಹಿಂಭಾಗದಲ್ಲಿರುವ ಬ್ಲಾಕ್‌ಸ್ಪಾಟ್ ಅನ್ನು ತೆರವುಗೊಳಿಸುವಂತೆ ಸಭೆಯಲ್ಲಿ ತಿಳಿಸಿದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಘನತ್ಯಾಜ್ಯ ನಿರ್ವಹಣೆ ವಿಭಾಗ**

ಶ್ರೀ ಎಂ.ಎ. ಪೊನ್ನಪ್ಪ ರವರು ಮಾತನಾಡಿ, 12ನೇ ಮುಖ್ಯರಸ್ತೆಯಲ್ಲಿ ಇರುವ ಕಸವನ್ನು ತೆರವುಗೊಳಿಸಲು ಘನತ್ಯಾಜ್ಯ ನಿರ್ವಹಣೆ ವಿಭಾಗ ಶ್ರೀ ಅರವಿಂದ್ ರವರಿಗೆ ಸಭೆಯಲ್ಲಿ ತಿಳಿಸಿದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಘನತ್ಯಾಜ್ಯ ನಿರ್ವಹಣೆ ವಿಭಾಗ**



Scanned by CamScanner

ಶ್ರೀ ಎಂ.ಕೆ.ಎನ್. ಆಚಾರ್ಯ ರವರು ಮಾತನಾಡಿ, ಹೆಚ್.ಎಸ್.ಆರ್ 5ನೇ ಬಡಾವಣೆಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಕೋರಿದರು.

**ಕ್ರಮ: ನಿರ್ದೇಶಕರು (ದಕ್ಷಿಣ)**
**ಪಶುಪಾಲನಾ ವಿಭಾಗ**

ಶ್ರೀ ಸಜೀ ಜಾರ್ಜ್ ರವರು ಮಾತನಾಡಿ, 5ನೇ ಅಡ್ಡರಸ್ತೆಯಲ್ಲಿ ನಾಮಫಲಕಗಳನ್ನು ಅಳವಡಿಸಲು ಕ್ರಮ ಕೈಗೊಳ್ಳುವಂತೆ ಸಭೆಗೆ ತಿಳಿಸಿದರು.

**ಕ್ರಮ: ಸಹಾಯಕ ಕಾರ್ಯಪಾಲಕ ಅಭಿಯಂತರರು**
**ಕೋರಮಂಗಲ ಉಪ ವಿಭಾಗ**

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳಿಗೆ ವಂದನೆಗಳನ್ನು ತಿಳಿಸುತ್ತಾ, ಇಂದಿನ ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಕೈಗೊಂಡಿರುವ ಕ್ರಮಗಳನ್ನು ಮುಂದಿನ ಸಭೆಯಲ್ಲಿ ಪೂರ್ಣ ಮಾಹಿತಿಯನ್ನು ಒದಗಿಸಬೇಕೆಂದು ಸದಸ್ಯ ಕಾರ್ಯದರ್ಶಿ ಮತ್ತು ಸಭೆಯಲ್ಲಿ ಹಾಜರಾಗಿದ್ದ ಎಲ್ಲಾ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ. ಪ್ರದೀಪ್ ಕುಮಾರ್ .ಆರ್)
ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು,
ವಾರ್ಡ–173 ಜಕ್ಕಸಂದ್ರ

(ಶ್ರೀ ಸಂಜೀವಕುಮಾರ್)
ನೋಡಲ್ ಅಧಿಕಾರಿಗಳು
ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು
ವಾರ್ಡ–173 ಜಕ್ಕಸಂದ್ರ



Scanned by CamScanner




Scanned by CamScanner



Scanned by CamScanner